**1 ನೇ ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಾಗರ**

**ಸಿ.ಸಿ ಸಂಖ್ಯೆಃ 839/2022**

**ಸಿ.ಡಬ್ಲ್ಯೂ -1, ಪಿ.ಡಬ್ಲ್ಯೂ -1**

| | | |
|---|---|---|
| ಸಾಕ್ಷಿದಾರರ ಹೆಸರು | : | ಲೋಕೇಶ್ ಹೆಚ್.ಆರ್. |
| ತಂದೆಯ ಹೆಸರು | : | ರಾಜಪ್ಪ |
| ವಯಸ್ಸು | : | 32 ವರ್ಷ |
| ಉದ್ಯೋಗ | : | ಖಾಸಗಿ ನೌಕರಿ |
| ವಾಸ | : | ಬರದವಳ್ಳಿ, ಸಾಗರ ತಾಲ್ಲೂಕು. |

**ಪ್ರಮಾಣೀಕರಿಸಿದ ದಿನಾಂಕ : 21.07.2026.**

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1. ಚಾಸ 2 ರಿಂದ 4 ರವರ ಪರಿಚಯವಿದೆ. ಆರೋಪಿತರ ಪರಿಚಯವಿದೆ. ಆರೋಪಿತರು ಮತ್ತು ನನ್ನ ನಡುವೆ ಯಾವುದೇ ಜಗಳವಾಗಿರುವುದಿಲ್ಲ. ಆರೋಪಿತರು ನನಗೆ ಹೊಡಿ ಬಡಿ ಮಾಡಿ ಅವಾಚ್ಯ ಶಬ್ದಗಳಿಂದ ನಿಂದಿಸಿ ಜೀವ ಬೆದರಿಕೆ ಹಾಕಿರುವುದಿಲ್ಲ. ನಾನು ನನ್ನ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಗೆ ಕಡತದಿಂದ ಒಂದು ದಾಖಲೆಯನ್ನು ತೆಗೆದು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಪಿರ್ಯಾದಾಗಿದ್ದು, ಅದನ್ನು ನಿಪಿ 1 ಎಂದು, ಸಾಕ್ಷಿಯ ಸಹಿಯನ್ನು ನಿಪಿ 1(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಸ್ಥಳ ಪಂಚನಾಮೆ ಮತ್ತು ಅದರ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸ್ಥಳ ಪಂಚನಾಮೆಯನ್ನು ನಿಪಿ 2 ಎಂದು, ಸಾಕ್ಷಿಯ ಸಹಿಯನ್ನು ನಿಪಿ 2(ಎ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯು ಪಿರ್ಯಾದಿಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

**ಪಾಟೀ ಸವಾಲುಃ- ಸ.ಸ.ಅ. ರವರಿಂದಃ-**

1. ದಿಃ31.01.2022 ರಂದು ಸಂಜೆ 5.30 ಗಂಟೆಯ ಸಮಯದಲ್ಲಿ ಆರ್.ಕೆ. ಹೋಟೇಲ್ ಹತ್ತಿರ ನಾನು ಮತ್ತು ಚಾಸ 2 ಹಾಗೂ ಚಾಸ 3 ರವರು ಹೋಟೇಲ್ ನಲ್ಲಿ ಟೀ ಕುಡಿದು ಹೊರಗೆ

ಬಂದಾಗ ಆರೋಪಿತರು ಸಿಗರೇಟನ್ನು ಸೇದಿ ಹೊಗೆಯನ್ನು ನನ್ನ ಮುಖಕ್ಕೆ ಬಿಟ್ಟಿರುತ್ತಾರೆ ಎಂದರೆ ಸರಿಯಲ್ಲ. ನಾನು ಏಕೆ ಎಂದು ಕೇಳಿದಾಗ 1 ನೇ ಆರೋಪಿಯು ಅವಾಚ್ಯವಾಗಿ ನಿಂದಿಸಿದ ಎಂದರೆ ಸರಿಯಲ್ಲ. 1 ನೇ ಆರೋಪಿ ಅಲ್ಲೇ ಬಿದ್ದಿದ್ದ ಒಂದು ಕಬ್ಬಿಣದ ರಾಡನ್ನು ತೆಗೆದುಕೊಂಡು ನನ್ನ ಎಡಭುಜಕ್ಕೆ ಹೊಡೆದ ಎಂದರೆ ಸರಿಯಲ್ಲ. 2 ನೇ ಆರೋಪಿಯು ಕೈಯಿಂದ ನನ್ನ ಮುಖಕ್ಕೆ, ಮೂಗಿಗೆ ಹೊಡೆದು ನೋವುಂಟು ಮಾಡಿದ ಎಂದರೆ ಸರಿಯಲ್ಲ. ಆರೋಪಿತರು ನನಗೆ ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರೊಂದಿಗೆ ರಾಜಿ ಆಗಿದ್ದೇನೆ ಎಂದರೆ ಸರಿ. ರಾಜಿ ಆಗಿರುವ ಕಾರಣ ಸುಳ್ಳು ಸಾಕ್ಷಿ  ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.

ಮರು ವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**

**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.